**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ.536/2024</u>**

| | | |
|---|---|---|
| ಸಾಕ್ಷಿದಾರರ ಹೆಸರು | : ರಾಜು | ಪ್ರಾಸಾ-5 |
| ತಂದೆಯ ಹೆಸರು | : ಕುನ್ಯ | ಚಾಸಾ-6 |
| ವಯಸ್ಸು | : 47 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 30.12.2025 |
| ವಾಸಸ್ಥಳ | : ಬಾನೆಹಳ್ಳಿ | |

**<u>:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:</u>**

ನ್ಯಾಯಾಲಯದ ಮುಂದಿರುವ ಆರೋಪಿಯ ಮುಖ ಪರಿಚಯ ನನಗಿದೆ. ಚಾಸಾ-1, 2 ಮತ್ತು 5 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-2 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ನಿಪಿ-3 ರ ಫೋಟೋದಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸುತ್ತಾರೆ.

ಕಳೆದ 1½ ವರ್ಷದ ಹಿಂದೆ ನಾನು ಚಾಸಾ-2 ರವರ ತೋಟದಲ್ಲಿ ಕೆಲಸ ಮಾಡುತ್ತಿದ್ದ ಸಮಯದಲ್ಲಿ ಪೋಲಿಸರು ನನ್ನನ್ನು ಸಹಿ ಮಾಡಲು ಕರೆಸಿರುತ್ತಾರೆ. ಸದರಿ ಸಹಿಯನ್ನು ಪೋಲಿಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ನಿಪಿ-2 ರಲ್ಲಿ ಏನನ್ನು ಬರೆಯಲಾಗಿದೆ ಎಂದು ನಾನು ಓದಿ ತಿಳಿದುಕೊಂಡಿರುವುದಿಲ್ಲ ಮತ್ತು ಪೋಲಿಸರು ನನಗೆ ಓದಿ ತಿಳಿಸಿರುವುದಿಲ್ಲ. ನಿಪಿ-3 ನ್ನು ಎಲ್ಲಿ ತೆಗೆಯಲಾಗಿದೆ ಎಂದು ನನಗೆ ನೆನಪಾಗುತ್ತಿಲ್ಲ. ನಾನು ಸಾಯಂಕಾಲದ ಸಮಯಕ್ಕೆ ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ. ನನ್ನ ಜೊತೆ ಇತರರು ಯಾರು ಸಹಿ ಮಾಡಿರುತ್ತಾರೆ ಎಂಬ ಬಗ್ಗೆ ನನಗೆ ನೆನಪಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**<u>ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:</u>**

ದಿ.26.02.2024 ರಂದು ಮ.2.00 ರಿಂದ 3.00 ರ ಸಮಯದಲ್ಲಿ ಚಾಸಾ-1 ರವರ ಮನೆಯ ಬಳಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ-1 ರವರ ಮನೆಯಲ್ಲಿ ಆಭರಣಗಳು ಕಳುವಾದ ಹಿನ್ನಲೆಯಲ್ಲಿ ಮಹಜರ್ ಕ್ರಮ ಜರುಗಿಸಿದ್ದು ಅದಕ್ಕೆ ಕುರಿತಂತೆ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ-1 ರವರು ಕೃತ್ಯ ನಡೆದ ಸ್ಥಳವನ್ನು ತೋರಿಸಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಚಾಸಾ-6 ರವರು ಸಹಿ ಮಾಡಿರುವ ಬಗ್ಗೆ

ನನಗೆ ತಿಳಿದಿರುವುದಿಲ್ಲ. ನನಗೆ ಎಲ್ಲಾ ವಿಚಾರ ತಿಳಿದಿದ್ದು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.536/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಸದಾಶಿವ | ಪ್ರಾಸಾ-6 |
| ತಂದೆಯ ಹೆಸರು | : ಲೇಟ್ ಆನಂದ | ಚಾಸಾ-7 |
| ವಯಸ್ಸು | : 45 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 30.12.2025 |
| ವಾಸಸ್ಥಳ | : ಬಾನೆಹಳ್ಳಿ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿದೆ. ಚಾಸಾ-1, 2 ಮತ್ತು 8 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-15 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-15(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-16 ರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸಿರುತ್ತಾರೆ.

ಕಳೆದ 1½ ವರ್ಷದ ಹಿಂದೆ ನಾನು ಚಾಸಾ-2 ರವರ ಮನೆಯ ಒಳಗೆ ನಿಪಿ-15 ಕ್ಕೆ ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಮಾಡಿರುತ್ತೇನೆ ಎಂದು ನನಗೆ ತಿಳಿದಿರುವುದಿಲ್ಲ. ನಿಪಿ-15 ರಲ್ಲಿ ಏನನ್ನು ಬರೆಯಲಾಗಿದೆ ಎಂದು ನಾನು ಓದಿ ತಿಳಿದುಕೊಂಡಿರುವುದಿಲ್ಲ ಮತ್ತು ಪೋಲಿಸರು ನನಗೆ ಓದಿ ತಿಳಿಸಿರುವುದಿಲ್ಲ. ನಿಪಿ-16 ನ್ನು ಚಾಸಾ-2 ರವರ ಮನೆಯಲ್ಲಿ ತೆಗೆಯಲಾಗಿರುತ್ತದೆ. ನಾನು ನಿಪಿ-15 ಕ್ಕೆ ಸ.5.30 ಸಮಯಕ್ಕೆ ಸಹಿ ಮಾಡಿರುತ್ತೇನೆ. ನಿಪಿ-16 ನ್ನು ಯಾವ ವಿಚಾರದ ಕುರಿತು ತೆಗೆಯಲಾಗಿರುತ್ತದ ಎಂದು ನನಗೆ ತಿಳಿದಿರುವುದಿಲ್ಲ. ಇದನ್ನು ಹೊರತುಪಡಿಸಿ ನನಗೆ ಇನ್ಯಾವುದೇ ವಿಚಾರ ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.26.02.2024 ರಂದು ಸ.7.30 ರಿಂದ 8.00 ರ ಸಮಯದಲ್ಲಿ ಚಾಸಾ-2 ರವರ ಮನೆಯ ಕೊಠಡಿಯ ಒಳಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ದಿ.26.02.2024 ರಂದು ಸದರಿ ಸಹಿಯನ್ನು ಮಾಡಿರುತ್ತೀರ ಎಂದರೆ ಸಾಕ್ಷಿಯು ದಿನಾಂಕ ನೆನಪಿರುವುದಿಲ್ಲ ಎಂದು ನುಡಿಯುತ್ತಾರೆ. ಆ ದಿನ ನ್ಯಾಯಾಲಯದ ಮುಂದಿರುವ ಆರೋಪಿಯು ತಾನು ಕಳ್ಳತನ ಮಾಡಿರುವ ಸ್ಥಳವನ್ನು ತೋರಿಸಿದ ಮೇರೆಗೆ ನಿಪಿ-15 ನ್ನು ಬರೆಯಲಾಗಿ ನಾನು ಅದಕ್ಕೆ ಸಹಿ ಮಾಡಿರುತ್ತೇನೆ ಎಂದರೆ

ಸರಿಯಲ್ಲ. ನನಗೆ ಪ್ರಕರಣದ ಬಗ್ಗೆ ಎಲ್ಲಾ ವಿಚಾರ ತಿಳಿದಿದ್ದು ನಾನು ಆರೋಪಿಯ ತೋಟದಲ್ಲಿ ಕೆಲಸ ಮಾಡುವ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.536/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಪ್ರದೀಪ್ ಕುಮಾರ್ | ಪ್ರಾಸಾ-7 |
| ತಂದೆಯ ಹೆಸರು | : ಲೇಟ್ ಕುಂಜಿಕುಟ್ಟಿ | ಚಾಸಾ-8 |
| ವಯಸ್ಸು | : 45 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 30.12.2025 |
| ವಾಸಸ್ಥಳ | : ಚಕ್ಕಮಕ್ಕಿ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿದೆ. ಚಾಸಾ-1, 2 ಮತ್ತು 7 ರವರ ಪರಿಚಯ ನನಗಿದೆ.

ಸಾಕ್ಷಿಗೆ ದಿ.26.02.2024 ರ ಮಹಜರ್ ಪ್ರತಿಯನ್ನು ತೋರಿಸಲಾಗಿ ಅರದಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಸದರಿ ಮಹಜರ್ ನ್ನು ನಿಪಿ-15 ಎಂದು ಗುರುತಿಸಲಾಯಿತು ಮತ್ತು ಅದರಲ್ಲಿರುವ ಸಾಕ್ಷಿಯು ಸಹಿಯನ್ನು ನಿಪಿ-15(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಒಂದು ಫೋಟೋವನ್ನು ತೋರಿಸಲಾಗಿ ಅದರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸಿದ್ದು, ಸದರಿ ಫೋಟೋವನ್ನು ನಿಪಿ-16 ಎಂದು ಗುರುತಿಸಲಾಯಿತು.

ಕಳೆದ 1½ ವರ್ಷದ ಹಿಂದೆ ನಾನು ಚಾಸಾ-2 ರವರ ಮನೆಯ ಬಳಿ ನಿಪಿ-15 ಕ್ಕೆ ಸಹಿ ಮಾಡಿರುತ್ತೇನೆ. ಪೋಲಿಸರ ಕೋರಿಕೆಯ ಮೇರೆಗೆ ಸದರಿ ಸಹಿಯನ್ನು ಮಾಡಿರುತ್ತೇನೆ. ಯಾವ ವಿಚಾರಕ್ಕೆ ಸಹಿ ಮಾಡಿರುತ್ತೇನೆ ಎಂದು ನನಗೆ ತಿಳಿದಿರುವುದಿಲ್ಲ. ನಿಪಿ-15 ರಲ್ಲಿ ಏನನ್ನು ಬರೆಯಲಾಗಿದೆ ಎಂದು ನಾನು ಓದಿ ತಿಳಿದುಕೊಂಡಿರುವುದಿಲ್ಲ ಮತ್ತು ಪೋಲಿಸರು ನನಗೆ ಓದಿ ತಿಳಿಸಿರುವುದಿಲ್ಲ. ನಾನು ನಿಪಿ-15 ಕ್ಕೆ ಮಧ್ಯಾಹ್ನದ ಸಮಯದಲ್ಲಿ ಸಹಿ ಮಾಡಿರುತ್ತೇನೆ. ನನ್ನೊಟ್ಟಿಗೆ ಚಾಸಾ-7 ರವರು ಸಹಿ ಮಾಡಿರುತ್ತಾರೆ. ಇದನ್ನು ಹೊರತುಪಡಿಸಿ ನನಗೆ ಇನ್ಯಾವುದೇ ವಿಚಾರ ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.26.02.2024 ರಂದು ಸ.7.30 ರಿಂದ 8.00 ರ ಸಮಯದಲ್ಲಿ ಚಾಸಾ-2 ರವರ ಮನೆಯ ಬಳಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ದಿ.26.02.2024 ರಂದು ಸದರಿ ಸಹಿಯನ್ನು ಮಾಡಿರುತ್ತೀರ ಎಂದರೆ ಸಾಕ್ಷಿಯು ದಿನಾಂಕ ನೆನಪಿರುವುದಿಲ್ಲ ಎಂದು ನುಡಿಯುತ್ತಾರೆ.

ಆ ದಿನ ನ್ಯಾಯಾಲಯದ ಮುಂದಿರುವ ಆರೋಪಿಯು ತಾನು ಕಳ್ಳತನ ಮಾಡಿರುವ ಸ್ಥಳವನ್ನು ತೋರಿಸಿದ ಮೇರೆಗೆ ನಿಪಿ-15 ನ್ನು ಬರೆಯಲಾಗಿ ನಾನು ಅದಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಪ್ರಕರಣದ ಬಗ್ಗೆ ಎಲ್ಲಾ ವಿಚಾರ ತಿಳಿದಿದ್ದು ನಾನು ಆರೋಪಿಯ ತೋಟದಲ್ಲಿ ಕೆಲಸ ಮಾಡುವ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.